**ಕರ್ನಾಟಕ ಸರ್ಕಾರ**

ಸಂಖ್ಯೆ: ಗ್ರಾಅಪ/201/ಗ್ರಾಪಂಕಾ/2016

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ: 21-04-2016.

**ಅನಧಿಕೃತ ಟಿಪ್ಪಣಿ**

ವಿಷಯ: ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯು ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಿಗೆ ಕ್ಷೇತ್ರಿಯ ಇಲಾಖೆಗಳು ವಹಿಸಿರುವ ಕಾರ್ಯಗಳನ್ನು ಹಿಂಪಡೆದಿರುವ ಕುರಿತು.

ಉಲ್ಲೇಖ: ಸರ್ಕಾರದ ಪ್ರಧಾನ ಕಾರ್ಯದರ್ಶಿ, ವಸತಿ ಇಲಾಖೆ ರವರ ಅ.ಸ. ಸಂಖ್ಯೆ: ವಇ 5 ಪ್ರಕಾ: 2016 ದಿ:16-01-2016.

***

ಮೇಲ್ಕಂಡ ವಿಷಯ ಮತ್ತು ಉಲ್ಲೇಖದ ಕಡೆಗೆ ಗಮನ ಸೆಳೆಯಲಾಗಿದೆ. ದಿನಾಂಕ:02-01-2016 ರ ಸುತ್ತೋಲೆಯಲ್ಲಿ ಇತ್ತೀಚಿನ ದಿನಗಳಲ್ಲಿ ಬೇರೆ ಬೇರೆ ಇಲಾಖೆಗಳು ವಿವಿಧ ಕಾರ್ಯಗಳ ಮೇಲುಸ್ತುವಾರಿಯನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಗಮನಕ್ಕೆ ತರದೆ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಿಗೆ ಹೆಚ್ಚುವರಿ ಕಾರ್ಯಭಾರವನ್ನು ನೀಡುತ್ತಿರುವುದರಿಂದ ಮುಖ್ಯ ಕಾರ್ಯದರ್ಶಿಗಳ ಸೂಚನೆಯನ್ವಯ ಕ್ಷೇತ್ರಿಯ ಇಲಾಖೆಗಳು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯೊಂದಿಗೆ ಸಮಾಲೋಚನೆ ನಡೆಸದೆ ನೀಡಲಾಗಿರುವ ಜವಾಬ್ದಾರಿಗಳನ್ನು ಹಿಂಪಡೆದು ಇನ್ನುಮುಂದೆ ಯಾವುದೇ ಕ್ಷೇತ್ರಿಯ ಇಲಾಖೆಗಳ ಜವಾಬ್ದಾರಿಯನ್ನು ವಹಿಸದಂತೆ ಸೂಚನೆ ನೀಡಲಾಗಿರುತ್ತದೆ.

3 ಹಂತದ ಪಂಚಾಯತ್ ರಾಜ್ ಸಂಸ್ಥೆಗಳು ಸಂವಿಧಾನದ ಅನುಚ್ಛೇದ 243-ಜಿ ರಡಿ XI ನೇ ಅನುಸೂಚಿಯನ್ವಯ 3 ಹಂತದ ಪಂಚಾಯತ್ ರಾಜ್ ಸಂಸ್ಥೆಗಳು ಗ್ರಾಮೀಣ ವಸತಿಗೆ ಸಂಬಂಧಿಸಿದ ಕಾರ್ಯಗಳನ್ನು ನೆರವೇರಿಸುತ್ತಿವೆ. ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ, 1993 ರ ಅನುಸೂಚಿ-I, II ಮತ್ತು III ರಲ್ಲಿ ವಸತಿ ಯೋಜನೆಗಳನ್ನು ಗ್ರಾಮೀಣ ಪ್ರದೇಶದಲ್ಲಿ ಅನುಷ್ಠಾನಗೊಳಿಸುತ್ತಿವೆ. ದಿನಾಂಕ:02-01-2016 ರಂದು ಹೊರಡಿಸಿರುವ ಸುತ್ತೋಲೆಯು ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಿಗೆ ಹೆಚ್ಚುವರಿ ಕಾರ್ಯಭಾರವನ್ನು ನೀಡುತ್ತಿರುವುದಕ್ಕೆ ಸಂಬಂಧಿಸಿದ್ದಾಗಿದೆಯೇ ಹೊರತು ಗ್ರಾಮೀಣ ವಸತಿ ಅನುಷ್ಠಾನಕ್ಕೆ ಸಂಬಂಧಿಸಿರುವುದಿಲ್ಲವೆಂದು ವಸತಿ ಇಲಾಖೆಗೆ ತಿಳಿಸಿದೆ.

(ಟಿ.ವಿ.ಅರುಣ್ ಕುಮಾರ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

23/4/16

ಇವರಿಗೆ:

ಸರ್ಕಾರದ ಅಧೀನ ಕಾರ್ಯದರ್ಶಿ,
ವಸತಿ ಇಲಾಖೆ,
ವಿಕಾಸ ಸೌಧ,
ಬೆಂಗಳೂರು.

1292
23/4/16
25/4/16